## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಟಿ.ಎನ್.ಲಕ್ಷ್ಮೀಮೋಹನ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಶ್ರೀನಿವಾಸಪುರ, ಕೋಲಾರ ಜಿಲ್ಲೆ (ಪ್ರಸ್ತುತ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಕೊಪ್ಪ, ಚಿಕ್ಕಮಗಳೂರು ಜಿಲ್ಲೆ) ಇವರನ್ನು ಸೇವೆಯಿಂದ ಅಮಾನತ್ತುಗೊಳಿಸುವ ಬಗ್ಗೆ - ಆದೇಶ.

ಓದಲಾಗಿದೆ:- 1) ಓಂಬಡ್ಸ್‌ಮನ್, ಜಿಲ್ಲಾ ಪಂಚಾಯತ್, ಕೋಲಾರ ಇವರ ಮಧ್ಯಾಂತರ ವರದಿ ದಿನಾಂಕ 16.05.2016.

2) ಜಂಟಿ ನಿರ್ದೇಶಕರು (ತೋಟಗಾರಿಕೆ), ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಪರಿವೀಕ್ಷಣಾ ವರದಿ ದಿನಾಂಕ 23.05.2016.

3) ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರು ಮು.ಕಾ.ನಿ.ಅ., ಜಿಲ್ಲಾ ಪಂಚಾಯತ್, ಕೋಲಾರ ಇವರಿಗೆ ಬರೆದಿರುವ ಅ.ಸ.ಪತ್ರ ದಿನಾಂಕ 09.06.2016.

4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೋಲಾರ ಇವರ ಪತ್ರ ದಿನಾಂಕ 28.06.2016.

*********

ಪ್ರಸ್ತಾವನೆ:-

ಮೇಲೆ(2)ರಲ್ಲಿ ಓದಲಾದ ದಿನಾಂಕ 23.05.2016ರಲ್ಲಿ ಜಂಟಿ ನಿರ್ದೇಶಕರು (ತೋಟಗಾರಿಕೆ), ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ ಇವರು ರಾಜ್ಯ/ಜಿಲ್ಲಾ ಗುಣನಿಯಂತ್ರಣ ಮಾನಿಟರ್‌ರವರು ಹಾಗೂ ಲೆಕ್ಕ ಪರಿಶೋಧನಾ ಅಧಿಕಾರಿಗಳೊಂದಿಗೆ ಪರಿವೀಕ್ಷಣೆ ಮಾಡಿ ಸಲ್ಲಿಸಿರುವ ವರದಿ ಹಾಗೂ ಮೇಲೆ(1)ರಲ್ಲಿ ಓದಲಾದ ದಿನಾಂಕ 16.05.2016ರಲ್ಲಿ ಓಂಬಡ್ಸ್‌ಮನ್, ಜಿಲ್ಲಾ ಪಂಚಾಯತ್, ಕೋಲಾರ ಇವರು ಸಲ್ಲಿಸಿರುವ ಮಧ್ಯಂತರ ವರದಿಯಲ್ಲಿ ಕೋಲಾರ ಜಿಲ್ಲೆ, ಶ್ರೀನಿವಾಸಪುರ ತಾಲ್ಲೂಕು, ಲಕ್ಷ್ಮೀಪುರ ಮತ್ತು ನೆಲವಂಕಿ ಗ್ರಾಮ ಪಂಚಾಯಿತಿಗಳಲ್ಲಿ 2015-16ನೇ ಸಾಲಿನಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಅನುಷ್ಠಾನಗೊಳಿಸಿರುವ ಕಾಮಗಾರಿಗಳಲ್ಲಿ ನಡೆದಿರುವ ರೂ.36,93,106/-ಗಳ ಅವ್ಯವಹಾರ/ದುರುಪಯೋಗವಾಗಿರುವುದು ಮತ್ತು ದಿನಾಂಕ 10.05.2016 ರಿಂದ 13.05.2016ರ ವರೆಗೆ ಹೆಚ್ಚಿನ ಮಾನವ ದಿನಗಳನ್ನು ಸೃಜಿಸಿರುವುದು ಕಂಡು ಬಂದಿರುತ್ತದೆ.

ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರು ಮೇಲೆ ಓದಲಾದ ಕ್ರಮ ಸಂಖ್ಯೆ:3ರ ಅ.ಸ.ಪತ್ರದಲ್ಲಿ 2015-16ನೇ ಸಾಲಿನಲ್ಲಿ ಕೋಲಾರ ಜಿಲ್ಲೆ ಶ್ರೀನಿವಾಸಪುರ ತಾಲ್ಲೂಕಿನ ಲಕ್ಷ್ಮೀಪುರ ಮತ್ತು ನೆಲವಂಕಿ ಗ್ರಾಮ ಪಂಚಾಯಿತಿಗಳಲ್ಲಿ ದಿನಾಂಕ 10.05.2016 ರಿಂದ 13.05.2016ರವರೆಗೆ ನರೇಗಾ ಯೋಜನೆಯಡಿ ಹೆಚ್ಚಿನ ಮಾನವ ದಿನಗಳನ್ನು ಸೃಜಿಸಿರುವ ಹಾಗೂ ಕಾಮಗಾರಿ ಅನುಷ್ಠಾನಗೊಳಿಸಿರುವ ಕುರಿತು ಕಡತಗಳನ್ನು ಹಾಗೂ ಕೆಲವು ಕಾಮಗಾರಿಗಳನ್ನು ರಾಜ್ಯ/ಜಿಲ್ಲಾ ಗುಣನಿಯಂತ್ರಣ ಮಾನಿಟರ್ ಹಾಗೂ ಲೆಕ್ಕ ಪರಿಶೋಧನಾ ಅಧಿಕಾರಿಗಳೊಂದಿಗೆ ಪರಿವೀಕ್ಷಣೆ ಮಾಡಿ ಸಲ್ಲಿಸಿರುವ ವರದಿ ಹಾಗೂ ಓಂಬಡ್ಸ್‌ಮನ್, ಜಿಲ್ಲಾ ಪಂಚಾಯತ್, ಕೋಲಾರ ರವರು ಸದರಿ ಯೋಜನೆಯಡಿ ನಡೆದಿರುವ ಅವ್ಯವಹಾರಗಳ ದೂರಿನ ಕುರಿತು ತನಿಖೆ ಮಾಡಿ ಸಲ್ಲಿಸಿರುವ ವರದಿಗಳನ್ನು ಪರಿಶೀಲಿಸಲಾಗಿ, ಲಕ್ಷ್ಮೀಪುರ ಮತ್ತು ನೆಲವಂಕಿ ಗ್ರಾಮ ಪಂಚಾಯಿತಿಗಳಲ್ಲಿ ನರೇಗಾ ಯೋಜನೆಯಡಿ ಅನುಷ್ಠಾನಗೊಳಿಸಿರುವ ಕಾಮಗಾರಿಗಳಲ್ಲಿ

ನಡೆದಿರುವ ಅವ್ಯವಹಾರಗಳ ಮೊತ್ತ ರೂ.36,93,100/-ಗಳಾಗಿದ್ದು, ಸದರಿ ಯೋಜನೆಯನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗದ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಕಿರಿಯ ಇಂಜಿನಿಯರ್, ತಾಲ್ಲೂಕು ಪಂಚಾಯಿತಿ ಸಹಾಯಕ ಇಂಜಿನಿಯರ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನು ಕಾರ್ಯನಿರ್ವಾಹಕ ಅಧಿಕಾರಿಗಳು ಹಿಡಿತದಲ್ಲಿಟ್ಟುಕೊಳ್ಳದೆ ಇರುವುದರಿಂದ ಹಾಗೂ ಉದ್ಯೋಗ ಖಾತರಿ ಯೋಜನೆ ಮಾರ್ಗಸೂಚಿಗಳನ್ವಯ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಯು ಕಾರ್ಯಕ್ರಮ ಅಧಿಕಾರಿಗಳಾಗಿದ್ದು, ತಮ್ಮ ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳಿಗೆ ನಿಯಮಿತವಾಗಿ ಭೇಟಿ ನೀಡಿ, ಕಾರ್ಯಕ್ರಮದ ಅನುಷ್ಠಾನವು ಮಾರ್ಗಸೂಚಿ/ನಿಯಮಗಳನ್ವಯ ನಡೆಯುತ್ತಿರುವುದರ ಕುರಿತು ಪರಿಶೀಲನೆ ಮಾಡಿ, ಕಾಲಕಾಲಕ್ಕೆ ವರದಿ ಸಲ್ಲಿಸಿ, ಕೆಳಹಂತದ ಅಧಿಕಾರಿ/ಸಿಬ್ಬಂದಿಗಳಿಗೆ ಮಾರ್ಗದರ್ಶನ ಎಚ್ಚರಿಕೆ ನೀಡಿದ್ದರೆ ಇಷ್ಟೊಂದು ಪ್ರಮಾಣದಲ್ಲಿ ಅವ್ಯವಹಾರಗಳು ನಡೆಯಲು ಸಾಧ್ಯವಿರುತ್ತಿರಲಿಲ್ಲ. ಅಲ್ಲದೆ ಮಾರ್ಗಸೂಚಿ ಪ್ರಕಾರ ಗ್ರಾಮ ಪಂಚಾಯಿತಿಗಳಲ್ಲಿ ನಡೆಯುತ್ತಿರುವ ಸದರಿ ಯೋಜನೆಯ ಎಲ್ಲಾ ವಲಯ ಕಾಮಗಾರಿಗಳನ್ನು ಪರಿಶೀಲಿಸಬೇಕಾಗಿದ್ದು, ಕಾಲಕಾಲಕ್ಕೆ ಕಾಮಗಾರಿಗಳನ್ನು ಪರಿಶೀಲಿಸದೆ ಬೇಜವಾಬ್ದಾರಿತನ ತೋರಿರುವುದರಿಂದ ಹಣ ದುರುಪಯೋಗವಾಗಲು ಕಾರಣರಾಗಿರುತ್ತಾರೆ.

ಆದಕಾರಣ, ಸದರಿ ಅವಧಿಯಲ್ಲಿ ಕಾರ್ಯನಿರ್ವಾಹಕ ಅಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿದ್ದ ಶ್ರೀ ಟಿ.ಎನ್.ಲಕ್ಷ್ಮೀಮೋಹನ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಶ್ರೀನಿವಾಸಪುರ ಇವರನ್ನು ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಗಳು 1957ರ ನಿಯಮ-15(2)(ಎ)ರಂತೆ ಹಾಗೂ ಕರ್ನಾಟಕ ಪಂಚಾಯತ್ ರಾಜ್ ಕಾಯ್ದೆ 1993 ಕಲಂ-155/196ರಲ್ಲಿ ಪ್ರದತ್ತವಾಗಿರುವ ಅಧಿಕಾರಿದನ್ವಯ ಸೇವೆಯಿಂದ ಅಮಾನತ್ತುಗೊಳಿಸಲು ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರು ಅನಧಿಕೃತ ಟಿಪ್ಪಣಿ ದಿನಾಂಕ 12.08.2016ರಲ್ಲಿ ಶಿಫಾರಸ್ಸು ಮಾಡಿರುತ್ತಾರೆ.

ಪರಿಶೀಲಿಸಲಾಗಿ, ಶ್ರೀ ಟಿ.ಎನ್.ಲಕ್ಷ್ಮೀಮೋಹನ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಶ್ರೀನಿವಾಸಪುರ ಇವರು ಲಕ್ಷ್ಮೀಪುರ ಮತ್ತು ನೆಲವಂಕಿ ಗ್ರಾಮ ಪಂಚಾಯಿತಿಗಳಲ್ಲಿ ನರೇಗಾ ಯೋಜನೆ ಕಾಮಗಾರಿಗಳಲ್ಲಿ ಅನುಷ್ಠಾನದಲ್ಲಿ ಅನುಷ್ಠಾನಾಧಿಕಾರಿಗಳಾದ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗದ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಕಿರಿಯ ಇಂಜಿನಿಯರ್, ತಾಲ್ಲೂಕು ಪಂಚಾಯಿತಿ ಸಹಾಯಕ ಇಂಜಿನಿಯರ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನು ಕಾರ್ಯನಿರ್ವಾಹಕ ಅಧಿಕಾರಿಗಳು ಹಿಡಿತದಲ್ಲಿಟ್ಟುಕೊಳ್ಳದೆ ಇರುವುದರಿಂದ ಹಾಗೂ ಉದ್ಯೋಗ ಖಾತರಿ ಯೋಜನೆ ಮಾರ್ಗಸೂಚಿಗಳನ್ವಯ ತಾಲ್ಲೂಕು ಪಂಚಾಯಿತಿ ಕಾರ್ಯಕ್ರಮ ಅಧಿಕಾರಿಗಳಾಗಿದ್ದು, ತಮ್ಮ ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳಿಗೆ ನಿಯಮಿತವಾಗಿ ಭೇಟಿ ನೀಡಿ, ಕಾರ್ಯಕ್ರಮದ ಅನುಷ್ಠಾನವು ಮಾರ್ಗಸೂಚಿ/ನಿಯಮಗಳನ್ವಯ ನಡೆಯುತ್ತಿರುವುದರ ಕುರಿತು ಪರಿಶೀಲನೆ ಮಾಡಿ, ಕಾಲಕಾಲಕ್ಕೆ ವರದಿ ಸಲ್ಲಿಸಿ, ತಮ್ಮ ಕೆಳಹಂತದ ಅಧಿಕಾರಿ/ಸಿಬ್ಬಂದಿಗಳಿಗೆ ಮಾರ್ಗದರ್ಶನ ಎಚ್ಚರಿಕೆ ನೀಡಿದ್ದರೆ ಇಷ್ಟೊಂದು ಪ್ರಮಾಣದಲ್ಲಿ ಅವ್ಯವಹಾರಗಳು ನಡೆಯಲು ಸಾಧ್ಯವಿರುತ್ತಿರಲಿಲ್ಲ. ಅಲ್ಲದೆ ಮಾರ್ಗಸೂಚಿ ಪ್ರಕಾರ ಗ್ರಾಮ ಪಂಚಾಯಿತಿಗಳಲ್ಲಿ ನಡೆಯುತ್ತಿರುವ ಸದರಿ ಯೋಜನೆಯ ಎಲ್ಲಾ ವಲಯ ಕಾಮಗಾರಿಗಳನ್ನು ಪರಿಶೀಲಿಸಬೇಕಾಗಿದ್ದು, ಕಾಲಕಾಲಕ್ಕೆ ಕಾಮಗಾರಿಗಳನ್ನು ಪರಿಶೀಲಿಸದೆ ಬೇಜವಾಬ್ದಾರಿತನ ತೋರಿರುವುದರಿಂದ ಹಾಗೂ ರೂ. 36,93,106/-ಗಳ ಅವ್ಯವಹಾರ/ ಹಣ ದುರುಪಯೋಗವಾಗಲು ಮೇಲ್ನೋಟಕ್ಕೆ ಸಾಬೀತಾಗಿರುತ್ತದೆ.

ಆದಕಾರಣ, ಶ್ರೀ ಟಿ.ಎನ್.ಲಕ್ಷ್ಮೀಮೋಹನ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಶ್ರೀನಿವಾಸಪುರ (ಪ್ರಸ್ತುತ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಕೊಪ್ಪ, ಚಿಕ್ಕಮಗಳೂರು ಜಿಲ್ಲೆ) ಇವರು ತಮ್ಮ ಕಾರ್ಯನಿರ್ವಹಣೆಯಲ್ಲಿ ಸಂಪೂರ್ಣ ನಿಷ್ಠೆಯನ್ನು ತೋರದೆ ತೀವ್ರತರವಾದ ಕರ್ತವ್ಯಲೋಪವೆಸಗಿ, ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ವರ್ತಿಸಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವುದರಿಂದ, ಸದರಿಯವರನ್ನು ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಗಳು 1957ರ ನಿಯಮ-10(1)(ಡಿ)ರನ್ವಯ ಅಮಾನತ್ತುಗೊಳಿಸಲು ಸರ್ಕಾರವು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 142 ವಿಸೇಬಿ 2016 ಬೆಂಗಳೂರು ದಿನಾಂಕ:-30.12.2016</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ಟಿ.ಎನ್.ಲಕ್ಷ್ಮೀಮೋಹನ್, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಶ್ರೀನಿವಾಸಪುರ ಇವರು ತಮ್ಮ ಕಾರ್ಯನಿರ್ವಹಣೆಯಲ್ಲಿ ಸಂಪೂರ್ಣ ನಿಷ್ಠೆಯನ್ನು ತೋರದೆ ತೀವ್ರತರವಾದ ಕರ್ತವ್ಯಲೋಪವೆಸಗಿ, ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ವರ್ತಿಸಿರುವುದು ಹಾಗೂ ರೂ. 36,93,106/-ಗಳ ಅವ್ಯವಹಾರ/ಹಣ ದುರುಪಯೋಗವಾಗಲು ಕಾರಣರಾಗಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವುದರಿಂದ, ಸದರಿಯವರನ್ನು ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಗಳು 1957ರ ನಿಯಮ-10(1)(ಡಿ)ರನ್ವಯ ಸೇವೆಯಿಂದ ಅಮಾನತ್ತುಗೊಳಿಸಿ ಆದೇಶಿಸಿದೆ.

ಅಮಾನತ್ತಿನ ಅವಧಿಯಲ್ಲಿ ಸದರಿ ಅಧಿಕಾರಿಯು ಸಕ್ಷಮ ಪ್ರಾಧಿಕಾರದ ಅನುಮತಿ ಇಲ್ಲದೆ ಕೇಂದ್ರ ಸ್ಥಾನವನ್ನು ಬಿಡತಕ್ಕದ್ದಲ್ಲ ಹಾಗೂ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ-98ರನುಸಾರ ಜೀವನಾಧಾರ ಭತ್ಯೆಗೆ ಅರ್ಹರಿರುತ್ತಾರೆ.

ಸದರಿ ಅಧಿಕಾರಿಯ ಹುದ್ದೆಯ ಸ್ಥಾನ (ಲೀನ್)ವನ್ನು ಸಹಾಯಕ ಕಾರ್ಯದರ್ಶಿ (ಆಡಳಿತ), ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು ಇಲ್ಲಿಗೆ ವರ್ಗಾಯಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

30/12/2016

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಬಿ & ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ:-

1) ಮಹಾಲೇಖಪಾಲರು, ಕರ್ನಾಟಕ ವೃತ್ತ, ಬೆಂಗಳೂರು.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು.
3) ಸಂಬಂಧಿಸಿದ ಅಧಿಕಾರಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು, ಇವರ ಮುಖಾಂತರ).

ಪ್ರತಿ ಮಾಹಿತಿಗಾಗಿ:-

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಜಂಟಿ ಕಾರ್ಯದರ್ಶಿ (ಆಡಳಿತ) ಇವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3) ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು